ಸಾಕ್ಷಿಯನ್ನು ದಿನಾಂಕ **19-12-2022** ರಂದು ಕರೆದು ಪ್ರಮಾಣ ವಚನ ಬೋಧಿಸಲಾಯಿತು.

**ಸಾಕ್ಷಿಯ ಸತ್ಯಪ್ರತಿಜ್ಞೆ ಹೇಳಿಕೆಃ**

ನನ್ನ ಸಾಕ್ಷ್ಯದ ಹೇಳಿಕೆಯನ್ನು ಪ್ರಮಾಣ ಪತ್ರದ ರೂಪದಲ್ಲಿ ನನ್ನ ಹೇಳಿಕೆಯಂತೆ ತಯಾರಿಸಿ ಸಲ್ಲಿಸಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿರುತ್ತದೆ. ಸದರಿ ಈ ಪ್ರಮಾಣಪತ್ರದಲ್ಲಿರುವ ಸಹಿ ನನ್ನದೆ ಇರುತ್ತದೆ.

ನನ್ನ ವಾದಕ್ಕೆ ಪೂರಕವಾಗಿ ಆರೋಪಿ ನೀಡಿದ ಚೆಕ್ಕನ್ನು ಹಾಜರು ಮಾಡಿದ್ದು ಅದನ್ನು ನಿಪಿ-1 ಎಂದು, ಬ್ಯಾಂಕಿನವರು ನೀಡಿರುವ ಹಿಂಬರಹವನ್ನು ಹಾಜರು ಮಾಡಿದ್ದು ಅದನ್ನು ನಿಪಿ-2 ಎಂದು, ಆರೋಪಿಗೆ ನೀಡಿರುವ ವಕೀಲರ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-3 ಎಂದು, ಅಂಚೆ ಕಚೇರಿಯ ರಶೀದಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-4 ಎಂದು, ಅಂಚೆ ಕಚೇರಿಯ ಸ್ವೀಕೃತಿ ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿ-5 ಎಂದು, ನಮ್ಮ ಸಂಸ್ಥೆಯವರು ನನ್ನ ಹೆಸರಿಗೆ ಬರೆದುಕೊಟ್ಟಿರುವ ನಮ್ಮ ಸಹಕಾರಿ ಸಂಘದ ಆಡಳಿತ ಮಂಡಳಿಯ ನಿರ್ಣಯದ ಪ್ರತಿ (Resolution) ಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ಆದ್ದರಿಂದ ಆರೋಪಿಯ ವಿರುದ್ಧ ಕ್ರಮ ಕೈಗೊಳ್ಳಲು ವಿನಂತಿ.

ನನ್ನ ಉಕ್ತಲೇಖನದ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸರಿ ಇದೆ.

ಪ್ರಧಾನ ವ್ಯವಹಾರಿಕ ನ್ಯಾಯಾಧೀಶರು ಮತ್ತು
ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರು, ಪುತ್ತೂರು, ದ.ಕ.